ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADM10ACM2/ 72 /2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:11-02-2025.

-:: ಸುತ್ತೋಲೆ ::-

**ವಿಷಯ:-** 2024-25ನೇ ಸಾಲಿನ ಅರೆಕಾಲಿಕ (ಪಾರ್ಟ್ ಟೈಂ) ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳ ಪ್ರವೇಶದ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:-**
1. ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:21.12.2024 & 13.01.2025.
2. ಪ್ರಾಂಶುಪಾಲರು, ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು, ಇವರ ಪತ್ರ ಸಂ. ಎಸ್‌ಜೆಇಪಿ/02/ಪ್ರವೇಶ/2024/183, ದಿ:20-01-2025.
3. ಪ್ರಾಂಶುಪಾಲರು, ಎಂಇಐ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಎಂಇಐಇಪಿ/ಪ್ರವೇಶ/2025/46, ದಿ:29.01.2025.

**********

2024-025ನೇ ಸಾಲಿನಲ್ಲಿ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಅರೆಕಾಲಿಕ (ಪಾರ್ಟ್-ಟೈಮ್) ಡಿಪ್ಲೋಮಾ ಕೋರ್ಸುಗಳ ಪ್ರವೇಶಾತಿಯನ್ನು ದಿನಾಂಕ:10.01.2025ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ನಡೆಸಲು ಉಲ್ಲೇಖ(1)ರಲ್ಲಿ ನಿಗಧಿಪಡಿಸಲಾಗಿತ್ತು. ಉಲ್ಲೇಖ(2)ರ ಪ್ರಾಂಶುಪಾಲರುಗಳ ಪತ್ರದಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳನ್ನು ತುಂಬಲು ಪ್ರವೇಶ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ. ಪ್ರಿನ್ಸಿಪಾಲರುಗಳ ಮನವಿಯನ್ನು ಪರಿಗಣಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ **ಅರ್ಜಿ ವಿತರಿಸುವ ಮತ್ತು ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ದಿನಾಂಕ:14-02-2025ರವರೆಗೆ** ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ. ನಿಯಮಗಳ ಪ್ರಕಾರ **ದಿ:15-02-2025 ರ ಒಳಗೆ** ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪೂರ್ಣಗೊಳಿಸತಕ್ಕದ್ದು.

Manjunath

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7) ಡಿಪಿಪಿ (1) & (2) ವಿಭಾಗಕ್ಕೆ ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
8) ಕಡತಕ್ಕೆ.